# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಎಸ್.ಎಂ. ಚಿತ್ತಪ್ಪ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಇವರು ಸಲ್ಲಿಸಿರುವ ಮೇಲ್ಮನವಿಯ ಬಗ್ಗೆ ಆದೇಶ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ ರವರ ಆದೇಶ ಸಂಖ್ಯೆ: ಜಿಪಂ:ಆ(3)ಸಿಸಿಎ:ಸಿಆರ್-53/2015-16, ದಿನಾಂಕ:10.05.2017.
2. ಶ್ರೀ ಎಸ್.ಎಂ. ಚಿತ್ತಪ್ಪ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿ ದಿನಾಂಕ:10.07.2017.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 608 ಗ್ರಾಪಂಕಾ 2017, ದಿನಾಂಕ:22-08-2017.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂ:ಆ(3)ಸಿಸಿಎ:ಸಿಆರ್-53/2015-16, ದಿನಾಂಕ:08.02.2018.
5. ಸರ್ಕಾರದಿಂದ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿನಾಂಕ:02.05.2018, 15-09-2018.

**ಪ್ರಸ್ತಾವನೆ :**

ಶ್ರೀ ಎಸ್.ಎಂ.ಚಿತ್ತಪ್ಪ, ನಿವೃತ್ತ ಪಿ.ಡಿ.ಓ, ಉಡುವಳ್ಳಿ ಗ್ರಾಮ ಪಂಚಾಯಿತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರು ಉಡುವಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ,

**ದೋಷಾರೋಪಣೆ:**

"ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಬೇಕಾದ ವಿವಿಧ ಯೋಜನೆ/ಕಾರ್ಯಕ್ರಮಗಳ ಅನುಷ್ಠಾನವನ್ನು ಸಮರ್ಪಕವಾಗಿ ನಿರ್ವಹಿಸದೇ ಪ್ರಗತಿ ಕುಂಠಿತವಾಗಿರುವುದು ಕಂಡುಬಂದಿದ್ದು, ಸ್ವಚ್ಛಭಾರತ್ ಅಭಿಯಾನದಡಿ ಕಡತಗಳ/ದಾಖಲೆಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸದೇ, ಸಂಜೀವಿನಿ ಯೋಜನೆಯಡಿ ಸ್ವಸಹಾಯ ಸಂಘಗಳ ಮಾಹಿತಿ ಸಂಗ್ರಹಣೆ ಮತ್ತು ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸುವಲ್ಲಿ ಮತ್ತು ಆಧಾರ್ ಸೀಡಿಂಗ್ ಕಾರ್ಯನಿರ್ವಹಣೆಯಲ್ಲಿ ಗುರಿಯನ್ವಯ ಪ್ರಗತಿ ಸಾಧಿಸದೆ ಕರ್ತವ್ಯನಿರ್ಲಕ್ಷ್ಯ ತೋರಿರುತ್ತಾರೆ"

ಎಂಬ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ಕಾಯ್ದಿರಿಸಿ ಸದರಿ ನೌಕರರನ್ನು ಅಮಾನತ್ತುಗೊಳಿಸಲಾಗಿತ್ತು. ಈ ಬಗ್ಗೆ ವಿಚಾರಣೆ ನಡೆಸಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹೊಸದುರ್ಗ, ಇವರನ್ನು ವಿಚಾರಣಾಧಿಕಾರಿಗಳಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಸಲ್ಲಿಸಿದ ದಿನಾಂಕ:22.03.2017ರ ವಿಚಾರಣಾ ವರದಿಯಲ್ಲಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುತ್ತದೆ ಎಂದು ವರದಿ ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿರವರು ಮೇಲೆ ಓದಲಾದ (1)ರ ಆದೇಶದಲ್ಲಿ ಶ್ರೀ ಎಸ್.ಎಂ.ಚಿತ್ತಪ್ಪ, ಇವರಿಗೆ ವಾಗ್ದಂಡನೆಯನ್ನು ವಿಧಿಸಿ, ಅಮಾನತ್ತು ಅವಧಿಯನ್ನು ಅಮಾನತ್ತು ಅವಧಿಯೆಂದು ಪರಿಗಣಿಸಿ ಆದೇಶಿಸಿರುತ್ತಾರೆ.

ಮೇಲೆ ಓದಲಾದ (1)ರ ಆದೇಶದ ವಿರುದ್ಧ ಶ್ರೀ ಎಸ್.ಎಂ.ಚಿತ್ತಪ್ಪ, ನಿವೃತ್ತ ಪಿ.ಡಿ.ಓ ಇವರು ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿದ್ದು, ಸದರಿ ಮೇಲ್ಮನವಿಯಲ್ಲಿನ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ-

- ತಮ್ಮನ್ನು ದಿನಾಂಕ:01-07-2015ರಂದು ಅಮಾನತ್ತುಗೊಳಿಸಿ, ದಿನಾಂಕ:17-10-2015ರಂದು ಅಮಾನತ್ತನ್ನು ತೆರವುಗೊಳಿಸಿರುತ್ತಾರೆ. ಇದಾದ ನಂತರ ಒಂದು ವರ್ಷದ ನಂತರ ಹಾಗೂ ತಮ್ಮ ನಿವೃತ್ತಿಯ ನಂತರ ದಿನಾಂಕ:17-10-2015ರಂದು ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿರುತ್ತಾರೆ.
- ಮಂಡನಾಧಿಕಾರಿ ಅಧಿಕಾರ ವ್ಯಾಪ್ತಿ ಮೀರಿ ನೋಟೀಸ್‌ಗಳನ್ನು ನೀಡಿ ದಾಖಲೆಗಳನ್ನು ಒದಗಿಸುವಂತೆ ಹಾಗೂ ಹಣ ತರುವಂತೆ ಒತ್ತಾಯ ಮಾಡಿರುತ್ತಾರೆ.
- ತಾವು ಪ್ರಗತಿ ವರದಿಯನ್ನು ಸಮರ್ಪಕವಾಗಿ ನೀಡಿದ್ದರೂ ಸಹ ಹಣಕ್ಕೋಸ್ಕರ ಮಂಡನಾಧಿಕಾರಿಗಳು ಸುಳ್ಳು ಪ್ರಗತಿ ಎಂದು ವರದಿ ನೀಡಿರುತ್ತಾರೆ.
- ಸಿಬ್ಬಂದಿ ಕೊರತೆ ಹಾಗೂ ಕಂಪ್ಯೂಟರ್ ಜ್ಞಾನವಿಲ್ಲದ ಕಾರಣ ಕಂಪ್ಯೂಟರ್‌ನಲ್ಲಿ ಅಳವಡಿಸಲು ಸಾಧ್ಯವಾಗಿರಲಿಲ್ಲ. ತರುವಾಯ ಎಲ್ಲಾ ಪ್ರಗತಿಗಳನ್ನು ಸಾಧಿಸಿ, ಸಂಬಂಧಪಟ್ಟ ಮಂಡನಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ.
- ಈಗಾಗಲೇ ವಯೋನಿವೃತ್ತಿ ಹೊಂದಿರುವುದರಿಂದ, ತಮ್ಮ ಸೇವಾವಧಿ ಕಡಿಮೆ ಮಾಡಿರುವುದರಿಂದ ತಮಗೆ ಅಡಾಕ್ ಪಿಂಚಣಿ ಮಂಜೂರಾಗಿರುತ್ತದೆ. ತಮ್ಮ ಮಕ್ಕಳ ವಿದ್ಯಾಭ್ಯಾಸ ಹಾಗೂ ಜಯದೇವ ಆಸ್ಪತ್ರೆಯಲ್ಲಿ ಹೃದಯ ಸಂಬಂಧಿ ಕಾಯಿಲೆಗೆ ಶಸ್ತ್ರಚಿಕಿತ್ಸೆ ಮಾಡಿದ್ದು, ಮಾತ್ರೆ ಹಾಗೂ ಚಿಕಿತ್ಸೆಗಾಗಿ ತಿಂಗಳವೆಚ್ಚವನ್ನು ಭರಿಸಲು ಸಾಧ್ಯವಾಗುತ್ತಿಲ್ಲ.
- ತಮ್ಮಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿಲ್ಲ ಹಾಗೂ ಹಣಕಾಸಿನ ಅವ್ಯವಹಾರ ಆಗಿರುವುದಿಲ್ಲ. ಆದ್ದರಿಂದ ತಾವು ದಯಮಾಡಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆದೇಶವನ್ನು ರದ್ದುಪಡಿಸಿ ತಮಗೆ ನ್ಯಾಯ ಒದಗಿಸುವಂತೆ ಕೋರಿರುತ್ತಾರೆ.

ಈ ಮೇಲ್ಮನವಿಯ ಬಗ್ಗೆ ದಿನಾಂಕ:30.05.2018ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಪರವಾಗಿ ಸಹಾಯಕ ಕಾರ್ಯದರ್ಶಿಯವರಾದ ಶ್ರೀ ಎಸ್.ಎಂ ನಾಗಭೂಷಣ ಹಾಗೂ ಹಿರಿಯೂರು ತಾಲ್ಲೂಕು ಪಂಚಾಯತ್ ಪರವಾಗಿ ವ್ಯವಸ್ಥಾಪಕರಾದ ಶ್ರೀ ಎಂ.ತಿಪ್ಪೆಸ್ವಾಮಿ ಹಾಗೂ ಅರ್ಜಿದಾರರು ಹಾಜರಿದ್ದರು. ಈ ಮೇಲ್ಮನವಿಯ ಬಗ್ಗೆ ದಿನಾಂಕ:191.09.2018ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಶ್ರೀ ಬಿ. ಲಕ್ಷ್ಮೀಪತಿ, ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಹಾಗೂ ಅರ್ಜಿದಾರರು ಹಾಜರಿದ್ದರು.

ಹಾಜರಿದ್ದ ಎಲ್ಲರ ಹೇಳಿಕೆಯನ್ನು ಪಡೆಯಲಾಯಿತು. ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆ/ಕಡತಗಳನ್ನು ಪರಿಶೀಲಿಸಲಾಗಿದೆ. ತಮ್ಮ ವಿರುದ್ಧ ಕೆ.ಸಿ.ಎಸ್(ಸಿ.ಸಿ.ಎ)ನಿಯಮಗಳಿಗೆ ವಿರುದ್ಧವಾಗಿ ದಂಡನೆಯನ್ನು ವಿಧಿಸಲಾಗಿದೆ ಎಂದು ಅರ್ಜಿದಾರರು ತಿಳಿಸಿರುತ್ತಾರೆ. ಶ್ರೀ ಎಸ್.ಎಂ.ಚಿತ್ತಪ್ಪ, ನಿವೃತ್ತ ಪಿ.ಡಿ.ಓ.ರವರು ಈಗಾಗಲೇ ನಿವೃತ್ತರಾಗಿರುವ ಹಿನ್ನೆಲೆಯಲ್ಲಿ ಮಾನವೀಯತೆ ದೃಷ್ಟಿಯಿಂದ ಸದರಿ ನೌಕರರ ವಿರುದ್ಧ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ವಿಧಿಸಿರುವ ದಂಡನಾದೇಶವನ್ನು ಮಾರ್ಪಡಿಸಲು ಸರ್ಕಾರವು ನಿರ್ಣಯಿಸಿದೆ ಹಾಗೂ ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ)ನಿಯಮಗಳು 1957 ನಿಯಮ 25ರಡಿಯಲ್ಲಿ ಮೇಲ್ಮನವಿಯನ್ನು ಪರಿಗಣಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/608/ಗ್ರಾಪಂಕಾ/2017**
**ಬೆಂಗಳೂರು, ದಿನಾಂಕ:27-11-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ)ನಿಯಮಗಳು 1957ರ ನಿಯಮ 8(ii)ರಡಿಯಲ್ಲಿ, ಶ್ರೀ ಎಸ್.ಎಂ.ಚಿತ್ತಪ್ಪ, ನಿವೃತ್ತ ಪಿ.ಡಿ.ಓ, ಉಡುವಳ್ಳಿ ಗ್ರಾಮ ಪಂಚಾಯಿತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಇವರ ಮೇಲ್ಮನವಿಯನ್ನು ಅಂಗೀಕರಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಜಿಲ್ಲೆರವರ ಆದೇಶಸಂಖ್ಯೆ: ಜಿಪಂ:ಆ(3)ಸಿಸಿಎ:ಸಿಆರ್-53/2015-16, ದಿನಾಂಕ:10.05.2017ರ ಆದೇಶವನ್ನು ಮಾರ್ಪಡಿಸಿ, ಅಮಾನತ್ತು ಅವಧಿ ದಿನಾಂಕ:01-07-2015 ರಿಂದ 17-10-2015ರ ಅವಧಿಯನ್ನು ಸದರಿ ನೌಕರರ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್) 7/12
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಗಳು:

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
4) ಶ್ರೀ ಚಿತ್ತಪ್ಪ, ಎಸ್.ಎಂ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.